**ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರವರ ಕಛೇರಿ, ಉತ್ತರಕನ್ನಡ, ಕಾರವಾರ**
**ಅಧಿಸೂಚನೆ ಸಂಖ್ಯೆ:1/2022**

**ದಿನಾಂಕ: 28 ನೇ ಏಪ್ರಿಲ್ ಮಾಹೆ 2022**

**ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಲು ಆರಂಭದ ದಿನಾಂಕ: 02.05.2022**

**ಕೊನೆಯ ದಿನಾಂಕ: 01.06.2022 ರ ರಾತ್ರಿ 11.59 ಗಂಟೆಯವರೆಗೆ**

**ಭಾರತೀಯ ಸ್ಟೇಟ್ ಬ್ಯಾಂಕ್ ಚಲನ್ ಮುಖಾಂತರ ಶುಲ್ಕ ಪಾವತಿಸಲು ಕಡೆಯ ದಿನಾಂಕ: 02.06.2022**

*****

ವಿಷಯ: ಶೀಘ್ರಲಿಪಿಗಾರರ ಗ್ರೇಡ್–III ಹುದ್ದೆಗಳ ನೇಮಕಾತಿ ಬಗ್ಗೆ.

ಉಲ್ಲೇಖ:
1. ಮಾನ್ಯ ಉಚ್ಛ ನ್ಯಾಯಾಲಯ, ಬೆಂಗಳೂರು ಇವರ ಪತ್ರ ಕ್ರಮ ಸಂಖ್ಯೆ:ಎಲ್.ಸಿ.ಎ.–2–128/2012(ಎಸ್/ಎಫ್)ದಿನಾಂಕ: 21.12.2018 ರಡಿಯಲ್ಲಿ Karnataka subordinate Courts(Ministerial and other posts)(Recruitment Rules 1982) Schedule Sl.No.5.
2. ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ಅಧಿಸೂಚನೆ ಸಂಖ್ಯೆ:1/2020.
3. ಸರ್ಕಾರಿ ಆದೇಶ ಸಂಖ್ಯೆ:ಲಾ–137/ಎಲ್.ಸಿ.ಇ–2014, ಬೆಂಗಳೂರು ದಿನಾಂಕ:28.03.2016 ಹಾಗೂ ಮಾನ್ಯ ಉಚ್ಛ ನ್ಯಾಯಾಲಯದ ಪತ್ರ ಕ್ರಮಸಂಖ್ಯೆ ಜಿಒಬಿ–1,58/2018, ದಿನಾಂಕ:10.05.2019.
4. ಮಾನ್ಯ ಉಚ್ಛ ನ್ಯಾಯಾಲಯ,ಬೆಂಗಳೂರು ಇವರ ಪತ್ರ ಕ್ರಮಸಂಖ್ಯೆ:ಎಲ್.ಸಿ.ಎ.–2–128/2012 ದಿನಾಂಕ: 21.12.2019.
5. ಕರ್ನಾಟಕ ಸರ್ಕಾರದ ಅಧಿಸೂಚನೆ ಸಂಖ್ಯೆ:ಎಲ್‌ಎಡಬ್ಲೂ/166/ಎಲ್‌ಎಸಿ 2015 ದಿನಾಂಕ: 06.03.2021.
6. ಮಾನ್ಯ ಉಚ್ಛ ನ್ಯಾಯಾಲಯ,ಬೆಂಗಳೂರು ಇವರ ಪತ್ರ ಕ್ರಮಸಂಖ್ಯೆ:ಡಿಜಿಎ 2(ಎಲ್.ಸಿ.ಎ.–2)–128/2012 ದಿನಾಂಕ: 27.01.2022.

*****

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಉತ್ತರಕನ್ನಡ, ಕಾರವಾರ ಘಟಕದ ವಿವಿಧ ನ್ಯಾಯಾಲಯಗಳಲ್ಲಿ ಕೆಳಗೆ ವಿವರಿಸಿರುವಂತೆ ಖಾಲಿ ಇರುವ ಶೀಘ್ರಲಿಪಿಗಾರರ ಗ್ರೇಡ್–III (STENOGRAPHERS GRADE – III)

ಹುದ್ದೆಗಳಿಗೆ (ಭರ್ತಿ ಆಗದೆ ಉಳಿದ ಹುದ್ದೆಗಳಿಗೆ) ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದ್ದು ಅರ್ಹ ಅಭ್ಯರ್ಥಿಗಳು ಆನ್‌ಲೈನ್ ಮೂಲಕ ಅರ್ಜಿಗಳನ್ನು ಸಲ್ಲಿತಕ್ಕದ್ದು.

ಅರ್ಜಿಗಳನ್ನು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಉತ್ತರಕನ್ನಡ, ಕಾರವಾರದ ವೆಬ್‌ಸೈಟ್ https://districts.ecourts.gov.in/uttarakannada–onlinerecruitment ನಲ್ಲಿ ನೀಡಲಾದ ಲಿಂಕ್ ಮೂಲಕ ಅನ್‌ಲೈನ್‌ನಲ್ಲಿ **ದಿನಾಂಕಃ**02.05.2022 **ರಿಂದ ದಿನಾಂಕಃ** 01.06.2022 **ರ ರಾತ್ರಿ** 11.59 **ರವರೆಗೆ** ಮಾತ್ರ ಸಲ್ಲಿಸತಕ್ಕದ್ದು.

1. ಹುದ್ದೆಗಳ ಸಂಖ್ಯೆಃ **06** (ಭರ್ತಿ ಆಗದೆ ಉಳಿದ ಹುದ್ದೆಗಳು )

ಹುದ್ದೆಗಳ ವರ್ಗೀಕರಣಃ

| ಹುದ್ದೆಗಳ ವರ್ಗೀಕರಣ | ಇತರೆ | ಗ್ರಾಮೀಣ | ಮಹಿಳೆ | ಕನ್ನಡ ಮಾಧ್ಯಮ | ಯೋಜನಾ ನಿರ್ರಾಶ್ರಿತ | ಅಂಗವಿಕಲ | ಮಾಜಿ ಸೈನಿಕ | ತೃತೀಯ ಲಿಂಗ | ಒಟ್ಟು |
|---|---|---|---|---|---|---|---|---|---|
| ಸಾಮಾನ್ಯ ವರ್ಗ | – | – | – | – | – | 1 (ಚಲನ ವೈಕಲ್ಯ) | – | – | 1 |
| ಪರಿಶಿಷ್ಟ ಜಾತಿ | – | 1 | – | – | – | 1 (ಚಲನ ವೈಕಲ್ಯ) | – | – | 2 |
| ಪರಿಶಿಷ್ಟ ಪಂಗಡ | – | – | – | – | – | – | – | – | – |
| ಪ್ರವರ್ಗ–1 | – | – | – | – | – | – | – | – | – |
| ಪ್ರವರ್ಗ–2 ಎ | 1 | – | – | – | – | 1 (ಚಲನ ವೈಕಲ್ಯ) | – | – | 2 |
| ಪ್ರವರ್ಗ–2 ಬಿ | – | – | – | – | – | – | – | – | – |
| ಪ್ರವರ್ಗ–3 ಎ | 1 | – | – | – | – | – | – | – | 1 |
| ಪ್ರವರ್ಗ–3 ಬಿ | – | – | – | – | – | – | – | – | – |
| **ಒಟ್ಟು** | 2 | 1 | – | – | – | 3 | – | – | 6 |

2. <u>ವೇತನ ಶ್ರೇಣಿ</u>: **27650-650-29600-750-32600-850-36000-950-39800-1100-46400-1250-52650 ಹಾಗೂ ಇತರೆ ಭತ್ಯೆಗಳು.**

3. <u>ಶೈಕ್ಷಣಿಕ ವಿದ್ಯಾರ್ಹತೆ</u>:

ಅ) ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕಡೆಯ ದಿನಾಂಕದ ಒಳಗಾಗಿ ದ್ವಿತೀಯ ಪಿ.ಯು.ಸಿ. ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರತಕ್ಕದ್ದು ಮತ್ತು

ಆ) ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ ವತಿಯಿಂದ ನಡೆಸುವ ಹಿರಿಯ ದರ್ಜೆ (Senior Grade) ಕನ್ನಡ ಮತ್ತು ಆಂಗ್ಲ ಭಾಷೆಗಳ ಬೆರಳಚ್ಚು (2 ವರ್ಷ) ಹಾಗೂ ಶೀಘ್ರಲಿಪಿ ವಿಷಯಗಳಲ್ಲಿ ತೇರ್ಗಡೆ ಹೊಂದಿರಬೇಕು ಅಥವಾ ಮೂರು ವರ್ಷಗಳ ಡಿಪ್ಲೋಮಾ ಇನ್ ಕಮರ್ಷಿಯಲ್ ಪ್ರಾಕ್ಟೀಸ್ (5 ಮತ್ತು 6 ನೇ ಸೆಮಿಸ್ಟರ್) ಡಿಪ್ಲೋಮಾ ಇನ್ ಕಮರ್ಷಿಯಲ್ ಪ್ರಾಕ್ಟೀಸ್/ಸೆಕ್ರೇಟರಿಯೇಟಲ್ ಪ್ರಾಕ್ಟೀಸ್ ಅಥವಾ ತತ್ಸಮಾನ ವಿದ್ಯಾರ್ಹತೆ.

4. <u>ಮೇಲ್ಕಂಡ ಹುದ್ದೆಗಳ ವರ್ಗೀಕರಣ ಈ ಕೆಳಕಂಡ ಸರ್ಕಾರಿ ಆಜ್ಞೆಗಳ ಪ್ರಕಾರ ಮಾಡಲಾಗಿದೆ</u>:

1) ಸರ್ಕಾರಿ ಆದೇಶ ಸಂಖ್ಯೆ: DPAR 08 SRS 95, ದಿನಾಂಕ: 20.06.1995.

2) ಸರ್ಕಾರಿ ಆದೇಶ ಸಂಖ್ಯೆ: DPAR 08 SRS 95, ದಿನಾಂಕ: 04.01.2008.

3) ಸರ್ಕಾರಿ ಆದೇಶ ಸಂಖ್ಯೆ:ಸಿಆಸುಇ 143 ಸೇನೆನಿ 2015, ದಿನಾಂಕ:08.01.2016.

4) ಸರ್ಕಾರಿ ಆದೇಶ ಸಂಖ್ಯೆ:ಸಿಆಸುಇ 08 ಸೇನೆನಿ 2001, ದಿನಾಂಕ:13.02.2001.

5) ಸರ್ಕಾರಿ ಆದೇಶ ಸಂಖ್ಯೆ:ಸಿಆಸುಇ 34 ಸೆಹಿಮ 95, ದಿನಾಂಕ:15.07.1996.

6) ಸರ್ಕಾರಿ ಆದೇಶ ಸಂಖ್ಯೆ:ಸಿಆಸುಇ 44 ಸೇನೆನಿ 2001, ದಿನಾಂಕ:27.07.2001.

7) ಸರ್ಕಾರಿ ಆದೇಶ ಸಂಖ್ಯೆ:ಸಿಆಸುಇ 128 ಸೇನೆನಿ 2006, ದಿನಾಂಕ:01.08.2009.

8) ಸರ್ಕಾರಿ ಆದೇಶ ಸಂಖ್ಯೆ:ಸಿಆಸುಇ 235 ಸೇನೆನಿ 2012, ದಿನಾಂಕ:22.11.2016.

9) ಸರ್ಕಾರಿ ಆದೇಶ ಸಂಖ್ಯೆ:ಸಿಆಸುಇ 3 ಸೆಹಿಮ 2015, ದಿನಾಂಕ:03.10.2015.

10) ಸರ್ಕಾರಿ ಆದೇಶ ಸಂಖ್ಯೆ:ಸಿಆಸುಇ 179 ಸೇನೆನಿ 2020, ದಿನಾಂಕ:14.07.2021.

11) ಸರ್ಕಾರಿ ಆದೇಶ ಸಂಖ್ಯೆ: LAW 01 LAC 2005 dated 13.02.2008.

12) ಸರ್ಕಾರಿ ಆದೇಶ ಸಂಖ್ಯೆ: LAW 166 LAC 2015 dated 06.03.2021.

5. ವಯೋಮಿತಿಃ

ಅ) ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಯು ಕನಿಷ್ಠ 18 ವರ್ಷ ವಯಸ್ಸನ್ನು ಪೂರೈಸಿರತಕ್ಕದ್ದು.

| | | |
|---|---|---|
| ಆ) ಗರಿಷ್ಠ ವಯೋಮಿತಿಃ | ಸಾಮಾನ್ಯ ವರ್ಗ | : 35 ವರ್ಷಗಳು |
| | 2 ಎ, 2 ಬಿ, 3 ಎ, 3 ಬಿ | : 38 ವರ್ಷಗಳು |
| | ಪರಿಶಿಷ್ಟ ಜಾತಿ : ಪರಿಶಿಷ್ಟ ಪಂಗಡ : ಪ್ರವರ್ಗ –1 | : 40 ವರ್ಷಗಳು |

**ವಿ.ಸೂಃ** ಮಾಜಿ ಸೈನಿಕರಿಗೆ ಗರಿಷ್ಠ ವಯೋಮಿತಿ ಅವನು ಕೇಂದ್ರದ ನಿಯತ ಸೇವೆಯಲ್ಲಿ/ ನೌಕಾಪಡೆಯಲ್ಲಿ/ವಾಯುಪಡೆಯಲ್ಲಿ ಎಷ್ಟು ವರ್ಷ ಸೇವೆ ಸಲ್ಲಿಸಿರುವನೋ ಆ ವರ್ಷಗಳಲ್ಲಿ ಮೂರು ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳ ಸಡಿಲಿಕೆ ಮತ್ತು ವಿಧವೆಯುವರಿಗೆ ಮತ್ತು ಅಂಗವಿಕಲರಿಗೆ 10 ವರ್ಷಗಳ ಸಡಿಲಿಕೆ ಹಾಗೂ ಈಗಾಗಲೇ ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳಿಗೆ ನಿಯಮಾನುಸಾರ ವಯೋಮಿತಿಯಲ್ಲಿ ಸಡಿಲಿಕೆ ನೀಡಲಾಗುವುದು (ಈ ಬಗ್ಗೆ ಸಡಿಲಿಕೆ ಕೋರಿದಲ್ಲಿ ಪ್ರಮಾಣಪತ್ರ ಸಲ್ಲಿಸಬೇಕು).

6. ಅರ್ಜಿ ಸಲ್ಲಿಸುವ ವಿಧಾನಃ

ನಿಗದಿತ ಅರ್ಜಿ ಶುಲ್ಕ ಪಾವತಿಸಬೇಕಾದ ಶುಲ್ಕ ಹಾಗೂ ವಿಧಾನಃ

| | |
|---|---|
| ಸಾಮಾನ್ಯ ವರ್ಗಕ್ಕೆ ಸೇರಿದ ಅಭ್ಯರ್ಥಿಗಳು | ರೂ,300.00 |
| ಪ್ರವರ್ಗ –2 ಎ, 2 ಬಿ ಮತ್ತು 3 ಎ, 3 ಬಿ ಗೆ ಸೇರಿದ ಅಭ್ಯರ್ಥಿಗಳು | ರೂ. 200.00 |
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1 ಮತ್ತು ಅಂಗವಿಕಲ ಅಭ್ಯರ್ಥಿಗಳು | ರೂ. 100.00 |

ನ್ಯಾಯಾಲಯದ ವೆಬ್‌ಸೈಟ್ https://districts.ecourts.gov.in/uttarakannada –onlinerecruitment ರಲ್ಲಿ ನೀಡಲಾದ ಲಿಂಕ್ ಮುಖಾಂತರ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾದ **State Bank Collect** ಮೂಲಕ ನಿಗದಿತ ಶುಲ್ಕವನ್ನು **online payment through net banking / creditcard / debit card / challan download** ಸೌಲಭ್ಯದ ಮೂಲಕ

ಪಾವತಿಸತಕ್ಕದ್ದು. ಶುಲ್ಕವನ್ನು ಆನ್‌ಲೈನ್ ಮೂಲಕ ಪಾವತಿ ಮಾಡಲು ಇಚ್ಚಿಸದ ಅಭ್ಯರ್ಥಿಗಳು ಚಲನ್ ಪ್ರತಿಯನ್ನು ಅಧಿಕೃತ ವೆಬ್‌ಸೈಟ್‌ನಿಂದ ಡೌನ್‌ಲೋಡ್ ಮಾಡಿಕೊಂಡು ಅದರ print out ಅನ್ನು ಪಡೆದುಕೊಂಡು ಎಸ್.ಬಿ.ಐ.ನ ಯಾವುದೇ ಶಾಖೆಗೆ ಹಾಜರುಪಡಿಸಿ ಶುಲ್ಕವನ್ನು ಪಾವತಿಸತಕ್ಕದ್ದು. ಇದನ್ನು ಹೊರತುಪಡಿಸಿ ಯಾವುದೇ ಡಿಮ್ಯಾಂಡ್ ಡ್ರಾಫ್ಟ : ಪೋಸ್ಟಲ್ ಆರ್ಡರ್ : ಮನಿ ಆರ್ಡರ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ. **ನಿಗದಿತ ಶುಲ್ಕ ಪಾವತಿಸದ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.**

ಅಭ್ಯರ್ಥಿಗಳು ಅರ್ಜಿಗಳನ್ನು ON–LINE ಮೂಲಕ ಭರ್ತಿ ಮಾಡುವ ಮೊದಲು ಕೆಳಕಂಡ ಸೂಚನೆಗಳನ್ನು ಕಡ್ಡಾಯವಾಗಿ ತಿಳಿದುಕೊಳ್ಳತಕ್ಕದ್ದು.

1 ಅಭ್ಯರ್ಥಿಗಳು ಅರ್ಜಿಯನ್ನು ON–LINE ಮೂಲಕ ಸಲ್ಲಿಸುವ ಮೊದಲು ಕೊಟ್ಟಿರುವ ಎಲ್ಲಾ ಸೂಚನೆಗಳನ್ನು ಗಮನವಿಟ್ಟು ಓದಿಕೊಳ್ಳಬೇಕು ಮತ್ತು ತಪ್ಪಾಗದಂತೆ ನೋಡಿಕೊಳ್ಳುವುದು. ಸರಿಯಾದ ಮಾಹಿತಿ ನೀಡದೇ ಇರುವ ಮತ್ತು ಅಪೂರ್ಣ ಮಾಹಿತಿಯುಳ್ಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

2 ಅಭ್ಯರ್ಥಿಗಳು ವಿವಿಧ ವರ್ಗಗಳಿಗೆ ಒಂದೇ ಅರ್ಜಿಯನ್ನು ಸಲ್ಲಿಸಬೇಕು. ಸದ್ರಿ ಅರ್ಜಿಯಲ್ಲಿಯೇ ತಾವು ಕ್ಲೇಮ ಮಾಡುವ ತಮ್ಮ ಮೀಸಲಾತಿಗಳ ಬಗ್ಗೆ ನಮೂದಿಸತಕ್ಕದ್ದು.

3 ಅಭ್ಯರ್ಥಿಗಳು ಮೊಬೈಲ್ ಸಂಖ್ಯೆಯನ್ನು ಕಡ್ಡಾಯವಾಗಿ ನಮೂದಿಸುವುದು ಹಾಗೂ ಇ–ಮೇಲ್ ಐ.ಡಿ.ಯನ್ನು ಹೊಂದಿದ್ದಲ್ಲಿ ನಮೂದಿಸುವುದು. ಒಂದು ವೇಳೆ SMS ಅಥವಾ ಇ–ಮೇಲ್ ಮುಖಾಂತರ ಅಭ್ಯರ್ಥಿಗಳಿಗೆ ಸಂದೇಶ ತಲುಪದಿದ್ದಲ್ಲಿ ಈ ಪ್ರಾಧಿಕಾರವು ಹೊಣೆಯಾಗುವುದಿಲ್ಲ.

4 ಅಭ್ಯರ್ಥಿಯು ಭಾವಚಿತ್ರ ಮತ್ತು ಸಹಿಯನ್ನು ಸ್ಕ್ಯಾನ್ ಮಾಡಿ ಅಪ್‌ಲೋಡ್ ಮಾಡಲು ಈ ಕೆಳಕಂಡ ನಿರ್ದೇಶನಗಳನ್ನು ಪಾಲಿಸತಕ್ಕದ್ದು.

ಅ) ಬಣ್ಣದ ಭಾವಚಿತ್ರವು ಇತ್ತೀಚಿನದ್ದಾಗಿದ್ದು ಅಳತೆಯಲ್ಲಿ 5 cm ಉದ್ದ x 3.6 cm ಅಗಲವುಳ್ಳದ್ದಾಗಿರಬೇಕು ಮತ್ತು 50 kb ಅಳತೆಯದ್ದಾಗಿರಬೇಕು ಹಾಗೂ ಅದು .jpg ನಮೂನೆಯಲ್ಲಿರಬೇಕು. ಭಾವಚಿತ್ರದ ಹಿಂಬದಿಯು ಬಿಳಿ ಬಣ್ಣದ್ದಾಗಿರಬೇಕು.

ಆ) ಭಾವಚಿತ್ರವನ್ನು ಸ್ಕ್ಯಾನ್ ಮಾಡಿ ಅರ್ಜಿಗೆ ಅಪ್‌ಲೋಡ್ ಮಾಡಬೇಕು (ಯಾವುದೇ ಕಾರಣಕ್ಕೂ ಭಾವಚಿತ್ರದ ಮೇಲೆ ಸಹಿ ಮಾಡಬಾರದು).

ಇ) ಅಭ್ಯರ್ಥಿಯು ಕಪ್ಪು ಬಾಲ್‌ಪಾಯಿಂಟ್ ಪೆನ್ನಿನಲ್ಲಿ ಬಿಳಿ ಹಾಳೆಯ ಮೇಲೆ ಸಹಿ ಮಾಡಿ (2.5 cm ಉದ್ದ x7.5 cm ಅಗಲವುಳ್ಳದ್ದಾಗಿರಬೇಕು ಮತ್ತು 26 kb ಅಳತೆಯದ್ದಾಗಿರಬೇಕು ಹಾಗೂ ಅದು .jpg ನಮೂನೆಯಲ್ಲಿರಬೇಕು) ಅಪ್‌ಲೋಡ್ ಮಾಡಬೇಕು.

5 ತದನಂತರ ಅಭ್ಯರ್ಥಿಯು ON-LINE ಅರ್ಜಿಯಲ್ಲಿ ಕೋರಲಾದ ಎಲ್ಲಾ ಮಾಹಿತಿಗಳನ್ನೂ ಭರ್ತಿ ಮಾಡಿ ನಿಗದಿತ ಶುಲ್ಕ ಪಾವತಿಸಲು ಅರ್ಜಿಯಲ್ಲಿ ತಿಳಿಸಿದಂತೆ ಕ್ರಮ ಕೈಗೊಳ್ಳುವುದು. ತದನಂತರ ಅರ್ಜಿಯನ್ನು ಹಾಗೂ ಶುಲ್ಕವನ್ನು ತುಂಬಿದ ಪ್ರತಿಯನ್ನು down load ಮಾಡಿಕೊಂಡು ನೇಮಕಾತಿ ಪ್ರಕ್ರಿಯೆ ಮುಗಿಯುವವರೆಗೂ ತಮ್ಮ ಹತ್ತಿರ ಇಟ್ಟುಕೊಳ್ಳತಕ್ಕದ್ದು ಹಾಗೂ ಸಂದರ್ಶನದ ಸಮಯದಲ್ಲಿ ಹಾಜರುಪಡಿಸತಕ್ಕದ್ದು.

6 ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆಗೂ ವಿಳಂಬ ಮಾಡದೇ ಮುಂಚಿತವಾಗಿ ಅರ್ಜಿಗಳನ್ನು ಸಲ್ಲಿಸತಕ್ಕದ್ದು. ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿ ಹಿಂದಿರುಗಿಸಲಾಗುವುದಿಲ್ಲ.

7 ನ್ಯಾಯಾಲಯದ ಅಧಿಕೃತ ವೆಬ್‌ಸೈಟ್‌ನಲ್ಲಿ ಅರ್ಜಿಯನ್ನು ಆನ್‌ಲೈನ್ ಮೂಲಕ ನೊಂದಾಯಿಸಲು / ಸಲ್ಲಿಸಲು ದಿನಾಂಕಃ 01.06.2022 ರ ರಾತ್ರಿ 11.59 ರವರೆಗೆ ಅವಕಾಶವಿರುತ್ತದೆ.

ಮತ್ತು

ಶುಲ್ಕವನ್ನು ಚಲನ್ ಮುಖಾಂತರ ಪಾವತಿಸಲು ದಿನಾಂಕಃ02.06.2022 ಕಡೆಯ ದಿನಾಂಕವಾಗಿದ್ದು ಅದರೊಳಗೆ ಸ್ಟೇಟ್ ಬ್ಯಾಂಕ್ ಅಫ್ ಇಂಡಿಯಾದ ಶಾಖೆಯ ವ್ಯವಹಾರದ ವೇಳೆಯಲ್ಲಿ ಪಾವತಿಸತಕ್ಕದ್ದು.

8 ಅರ್ಹ ಅಭ್ಯರ್ಥಿಗಳಿಗೆ SMS & E-Mail ಮುಖಾಂತರ ಮಾಹಿತಿ ನೀಡಲಾಗುವುದು. ಸಂದರ್ಶನಕ್ಕೆ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ನ್ಯಾಯಾಲಯದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವುದು. ಸದರಿ ಪಟ್ಟಿಯ ಆಧಾರದ ಮೇಲೆ ಅಭ್ಯರ್ಥಿಗಳನ್ನು ಸಂದರ್ಶನಕ್ಕೆ ಕರೆಯಲಾಗುವುದು.

9 ಆನ್‌ಲೈನ್ ಹೊರತುಪಡಿಸಿ ಇತರೆ ಯಾವುದೇ ವಿಧಾನದಲ್ಲಿ ಕಳುಹಿಸಿದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

10 ಸೇವಾ ನಿರತ ಅಭ್ಯರ್ಥಿಗಳು ಸಂಬಂಧಪಟ್ಟ ಪ್ರಾಧಿಕಾರದಿಂದ "ನಿರಾಕ್ಷೇಪಣಾ ಪ್ರಮಾಣಪತ್ರ" ವನ್ನು ಸದರಿ ಹುದ್ದೆಗೆ ಆಯ್ಕೆಯಾದ ಪಕ್ಷದಲ್ಲಿ, ಆಯ್ಕೆ ಪಟ್ಟಿ ಪ್ರಕಟವಾದ 30 ದಿನಗಳೊಳಗಾಗಿ ಪಡೆಯತಕ್ಕದು.

11 ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1,2 ಎ,2 ಬಿ,3 ಎ,3 ಬಿ ಅಡಿಯಲ್ಲಿ ಮೀಸಲಾತಿಯನ್ನು ಕ್ಲೇಮು ಮಾಡುವ ಅಭ್ಯರ್ಥಿಗಳು, ಕರ್ನಾಟಕ ಸರ್ಕಾರವು ನಿಗದಿಪಡಿಸಿರುವ ನಮೂನೆಯಲ್ಲಿ ಮತ್ತು ಸಕ್ರಮ ಪ್ರಾಧಿಕಾರವು ನೀಡಿದ ಪ್ರಮಾಣಪತ್ರವನ್ನು ಹೊಂದಿರತಕ್ಕದ್ದು.

12 ಗ್ರಾಮೀಣ, ಕನ್ನಡ ಮಾಧ್ಯಮ, ಯೋಜನಾ ನಿರಾಶ್ರಿತ, ಅಂಗವಿಕಲ, ಮಾಜಿ ಸೈನಿಕ ಹಾಗು ತೃತೀಯ ಲಿಂಗ ಅಭ್ಯರ್ಥಿಗಳ ಅಡಿಯಲ್ಲಿ ಮೀಸಲಾತಿಯನ್ನು ಕ್ಲೇಮು ಮಾಡುವ ಅಭ್ಯರ್ಥಿಗಳು ಸಕ್ಷಮ ಪ್ರಾಧಿಕಾರಗಳು ನೀಡಿದ ಪ್ರಮಾಣಪತ್ರಗಳನ್ನು ಹೊಂದಿರತಕ್ಕದ್ದು. ಗ್ರಾಮೀಣ ಅಭ್ಯರ್ಥಿ ಅಡಿಯಲ್ಲಿ ಮೀಸಲಾತಿಯನ್ನು ಕ್ಲೇಮು ಮಾಡುವ ಸಾಮಾನ್ಯ ವರ್ಗದ ಅಭ್ಯರ್ಥಿಗಳು ಕೆನೆಪದರ ಪ್ರಮಾಣಪತ್ರವನ್ನು (Creamy Layer Certificate) ಸಲ್ಲಿಸತಕ್ಕದ್ದು.

13 ಮೇಲ್ಕಂಡ ಕ್ರಮಸಂಖ್ಯೆ 11 ಹಾಗೂ 12ರ ಅಡಿಯಲ್ಲಿ ಪ್ರಯೋಜನಗಳನ್ನು ಕ್ಲೇಮು ಮಾಡುವ ಅಭ್ಯರ್ಥಿಗಳು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದಂದು ಅಥವಾ ಅದಕ್ಕಿಂತ ಮುಂಚೆಯೇ ಸಕ್ಷಮ ಪ್ರಾಧಿಕಾರಿಗಳು ನೀಡಿದ ಸಂಬಂಧಪಟ್ಟ ಪ್ರಮಾಣಪತ್ರಗಳನ್ನು ಹೊಂದಿರತಕ್ಕದ್ದು.

14 ವಿಕಲಚೇತನರು, ಮಾಜಿ ಸೈನಿಕರು, ವಿಧವೆಯರು, ವಯೋಮಿತಿ ಸಡಿಲಿಕೆಗಾಗಿ ಸಕ್ಷಮ ಪ್ರಾಧಿಕಾರಗಳು ನೀಡಿದ ಪ್ರಮಾಣಪತ್ರಗಳನ್ನು ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದಂದು ಹೊಂದಿರತಕ್ಕದ್ದು.

15 ಅಂಗವಿಕಲರಿಗೆ ಮೀಸಲಾದ ಹುದ್ದೆಗಳಿಗೆ ಅಧಿಸೂಚಿಸಿರುವ ಅಂಗವಿಕಲತೆ ಹೊಂದಿರುವ ಅಭ್ಯರ್ಥಿ ಲಭ್ಯವಿಲ್ಲದೇ ಇದ್ದಲ್ಲಿ ಅಂತಹ ರಿಕ್ತ ಸ್ಥಾನವನ್ನು ಮುಂದಿನ ನೇಮಕಾತಿಗೆ ಮುಂದೊಯ್ಯಲಾಗುವುದು.

16 ಮೌಖಿಕ ಪರೀಕ್ಷೆಯ ಸಮಯದಲ್ಲಿ ದಾಖಲೆಗಳ ಪರಿಶೀಲನೆಗಾಗಿ ಕರೆಯಲ್ಪಡುವ ಅಭ್ಯರ್ಥಿಗಳು, ಶೈಕ್ಷಣಿಕ ವಿದ್ಯಾರ್ಹತೆ, ಜನ್ಮ ದಿನಾಂಕವನ್ನು ತೋರಿಸಲು ಪ್ರಮಾಣಪತ್ರ, ಜಾತಿ ಪ್ರಮಾಣಪತ್ರ, ಮೀಸಲಾತಿಗೆ ಸಂಬಂಧಿಸಿದಂತೆ ಕ್ಲೇಮು ಮಾಡಿದ ಮೀಸಲಾತಿಗಳು, ಇವುಗಳಿಗೆ ಸಂಬಂಧಿಸಿದಂತೆ ಅಗತ್ಯ ಮೂಲ ದಾಖಲೆಗಳನ್ನು ಪರಿಶೀಲನೆಗಾಗಿ

ಸಲ್ಲಿಸತಕ್ಕದ್ದು. ಪರಿಶೀಲನೆ ಮಾಡುವಾಗ ಅರ್ಜಿದಾರರು ಅರ್ಜಿಯಲ್ಲಿ ಒದಗಿಸಿರುವ ಮಾಹಿತಿಯು ಸುಳ್ಳೆಂದು ಕಂಡುಬಂದಲ್ಲಿ, ಆಗ ಅವರ ಅಭ್ಯರ್ಥಿಕೆಯು ತಿರಸ್ಕೃತವಾಗುತ್ತದೆ ಹಾಗೂ ಅವರು ಸುಳ್ಳು ಮಾಹಿತಿ ನೀಡಿದ್ದಕ್ಕಾಗಿ ಕ್ರಿಮಿನಲ್ ಪ್ರಾಸಿಕ್ಯೂಷನ್‌ಗೂ ಸಹಾ ಗುರಿಯಾಗಬೇಕಾಗುತ್ತದೆ.

17 <u>ಅಭ್ಯರ್ಥಿಗಳು ತಮ್ಮ ದ್ವಿತೀಯ ಪಿ.ಯು.ಸಿ. ಅಂಕಗಳು ಶ್ರೇಣಿಯಲ್ಲಿದ್ದರೆ ಅಥವಾ CGPA ಆಗಿದ್ದರೆ ಅದನ್ನು ಅಂಕಗಳಾಗಿ ಪರಿವರ್ತಿಸಿ ಗರಿಷ್ಠ ಅಂಕಗಳು, ಪಡೆದ ಅಂಕಗಳು ಮತ್ತು ಒಟ್ಟು ಶೇಕಡಾವಾರನ್ನು ಕಡ್ಡಾಯವಾಗಿ ನಿಗದಿತ ಕಾಲಂನಲ್ಲಿ ನಮೂದಿಸಬೇಕು.</u>

18. ಅಭ್ಯರ್ಥಿಯು ನೇಮಕಾತಿ ಸಂಬಂಧದಲ್ಲಿ ಯಾವುದೇ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಭಿಸಿರುವುದು ಕಂಡುಬಂದಲ್ಲಿ ಅಂತಹವರನ್ನು ನೇಮಕಾತಿಗೆ ಪರಿಗಣಿಸಲಾಗುವುದಿಲ್ಲ.

19. ಮಹಿಳಾ ಅಭ್ಯರ್ಥಿಗಳು, ಯೋಜನಾ ನಿರಾಶ್ರಿತರು, ಕನ್ನಡ ಮಾಧ್ಯಮ, ಗ್ರಾಮೀಣ ಅಭ್ಯರ್ಥಿಗಳಿಗೆ ಮತ್ತು ಮಾಜಿ ಸೈನಿಕರಿಗೆ ಮೀಸಲಿರಿಸಿದ ರಿಕ್ತ ಸ್ಥಾನಗಳಿಗೆ ಅರ್ಹ ಅಭ್ಯರ್ಥಿಗಳು ಲಭ್ಯವಿಲ್ಲದಿದ್ದ ಪಕ್ಷದಲ್ಲಿ ಆಯಾ ವರ್ಗಕ್ಕೆ ಸೇರಿದ ಇತರೆ ಅರ್ಹ ಅಭ್ಯರ್ಥಿಗಳಿಂದ ಭರ್ತಿ ಮಾಡಿಕೊಳ್ಳಲಾಗುವುದು.

20. ಆಯ್ಕೆಯಾದ ಅಭ್ಯರ್ಥಿಗಳು ಕರ್ನಾಟಕ ಸೇವಾ ನಿಯಮ (ಪರಿವೀಕ್ಷಣೆ ನಿಯಮಗಳು) 1977 ರ ಪ್ರಕಾರ ಎರಡು ವರ್ಷಗಳ ಕಾಲ ಪರಿವೀಕ್ಷಣಾ ಅವಧಿಯಲ್ಲಿರುತ್ತಾರೆ. ಈ ಅವಧಿಯಲ್ಲಿ ಅಭ್ಯರ್ಥಿಗಳು ಅವರುಗಳ ಹುದ್ದೆಗೆ ನಿಗದಿಪಡಿಸಿರುವ ಇಲಾಖಾ ಪರೀಕ್ಷೆಗಳಲ್ಲಿ, ಕನ್ನಡ ಭಾಷಾ ಪರೀಕ್ಷೆಯಲ್ಲಿ ಮತ್ತು ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಉತ್ತೀರ್ಣರಾಗಬೇಕು.

21. **<u>ಆಯ್ಕೆ ವಿಧಾನಃ</u>**

ಅ) ಅಭ್ಯರ್ಥಿಗಳ ಆಯ್ಕೆಯು ಕರ್ನಾಟಕ ಅಧೀನ ನ್ಯಾಯಾಲಯಗಳ (ಲಿಪಿಕ ಮತ್ತು ಇತರೆ ಹುದ್ದೆಗಳ) (ತಿದ್ದುಪಡಿ) (ನೇಮಕಾತಿ) ನಿಯಮ 2007 ರ ಪ್ರಕಾರ ನೇಮಕಾತಿಯನ್ನು ನಡೆಸಲಾಗುವುದು.

ಆ) ಕನ್ನಡ ಮತ್ತು ಆಂಗ್ಲ ಭಾಷೆಗಳಲ್ಲಿ ಉಕ್ತಲೇಖನವನ್ನು ಕೊಟ್ಟು ಕಂಪ್ಯೂಟರ್‌ನಲ್ಲಿ ಬೆರಳಚ್ಚು ಮಾಡಿಸಿ ಅರ್ಹತಾ ಪರೀಕ್ಷೆ ನಡೆಸಲಾಗುವುದು.

ಇ) ಅರ್ಹತಾ ಪರೀಕ್ಷೆಯಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳ ಆಧಾರದ ಮೇಲೆ ಒಂದು ಹುದ್ದೆಗೆ 5 ಅಭ್ಯರ್ಥಿಗಳಂತೆ (1: 5 ರ ಅನುಪಾತದಲ್ಲಿ) ಅತೀ ಹೆಚ್ಚು ಅಂಕ ಪಡೆದ ಅಭ್ಯರ್ಥಿಗಳನ್ನು ಪ್ರಕಟಿಸಿರುವ ಹುದ್ದೆಗಳಿಗೆ ಅನುಗುಣವಾಗಿ ಸಂದರ್ಶನಕ್ಕೆ ಕರೆಯಲಾಗುವುದು ಮತ್ತು ಸಂದರ್ಶನದಲ್ಲಿ ಗಳಿಸುವ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.

**ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,**

**ಉತ್ತರಕನ್ನಡ, ಕಾರವಾರ**

<u>ಪ್ರತಿಯನ್ನುಃ ಮಾನ್ಯ ಮಹಾವಿಲೇಖನಾಧಿಕಾರಿಗಳು, ಕರ್ನಾಟಕ ಉಚ್ಛ ನ್ಯಾಯಾಲಯ, ಬೆಂಗಳೂರು ಇವರಿಗೆ ಮುಖಪತ್ರದೊಂದಿಗೆ ಮಾಹಿತಿಗಾಗಿ ಸಲ್ಲಿಸಿದೆ.</u>

<u>ಪ್ರತಿಯನ್ನುಃ</u>

1. ಪ್ರಧಾನ ನಗರ ವ್ಯವಹಾರ ಮತ್ತು ಸೆಷನ್ಸ ನ್ಯಾಯಾಧೀಶರು, ಬೆಂಗಳೂರು ನಗರ ಹಾಗೂ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಭಾಗಲಕೋಟೆ, ಬೆಳಗಾವಿ, ಬಳ್ಳಾರಿ, ಬೀದರ್, ಬಿಜಾಪುರ, ಚಾಮರಾಜನಗರ, ಚಿಕ್ಕಮಗಳೂರು, ಚಿಕ್ಕಬಳ್ಳಾಪುರ, ಚಿತ್ರದುರ್ಗ, ದಾವಣಗೆರೆ, ಧಾರವಾಡ, ಗದಗ, ಗುಲ್ಬರ್ಗಾ, ಹಾಸನ, ಹಾವೇರಿ, ಕೊಡಗು, ಕೋಲಾರ, ಕೊಪ್ಪಳ, ಮಂಡ್ಯ, ಮೈಸೂರು, ರಾಯಚೂರು, ರಾಮನಗರ, ಶಿವಮೊಗ್ಗ, ತುಮಕೂರು, ಉಡುಪಿ, ಯಾದಗಿರಿ ಇವರಿಗೆ ಮಾಹಿತಿ ಮತ್ತು ವ್ಯಾಪಕ ಪ್ರಚಾರಕ್ಕಾಗಿ.
2. ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯ ಪತ್ರ, ಸರ್ಕಾರಿ ಹೊರವಲಯ ಮುದ್ರಣಾಲಯ, ಮೈಸೂರು ರಸ್ತೆ, ಬೆಂಗಳೂರು–59 ಇವರಿಗೆ ಕರ್ನಾಟಕ ರಾಜ್ಯ ವಾರ್ತಾ ಪತ್ರದಲ್ಲಿ ಪ್ರಕಟಿಸುವ ಸಲುವಾಗಿ (ಎರಡು ಪ್ರತಿ).
3. ಉತ್ತರಕನ್ನಡ ಜಿಲ್ಲೆಯ ಎಲ್ಲಾ ತಾಲೂಕು ನ್ಯಾಯಾಲಯಗಳಿಗೆ – ವ್ಯಾಪಕ ಪ್ರಚಾರಕ್ಕಾಗಿ .
4. ಜಿಲ್ಲಾಧಿಕಾರಿಗಳು, ಉತ್ತರಕನ್ನಡ, ಕಾರವಾರ.

5. ಆಯುಕ್ತರು, ನಗರಸಭೆ, ಕಾರವಾರ.

6. ಸರ್ಕಾರಿ ಅಭಿಯೋಜಕರು, ಕಾರವಾರ.

7. ವಾರ್ತಾಧಿಕಾರಿಗಳು, ವಾರ್ತಾ ಇಲಾಖೆ, ಕಾರವಾರ.

8. ತಹಶೀಲ್ದಾರರು, ಕಾರವಾರ.

9. ನಿರ್ದೇಶಕರು, ರಾಜ್ಯ ವಾರ್ತಾ ಮತ್ತು ಪ್ರವಾಸೋಧ್ಯಮ ಇಲಾಖೆ, ಬೆಂಗಳೂರು.

10. ಆಯಕ್ತರು ಮತ್ತು ವಾರ್ತಾ ಇಲಾಖೆ, ನಂ.17, ಭಗವಾನ್ ಮಹಾವೀರ ಜೈನ್ (ಇನ್‌ಫಂಟ್ರಿ) ರಸ್ತೆ, ಬೆಂಗಳೂರು-560 001 - ಇವರಿಗೆ ವ್ಯಾಪಕ ಪ್ರಚಾರಕ್ಕಾಗಿ.

11. ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ಸೂಚನಾ ಫಲಕಕ್ಕಾಗಿ.